ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

# ಸಾಲ ನೀಡುವಲ್ಲಿ ಬ್ಯಾಂಕ್‌ಗಳ ವಿಳಂಬ ಸಲ್ಲ

## ವಸತಿ ಯೋಜನೆ ಫಲಾನುಭವಿಗಳಿಗೆ ತ್ವರಿತ ಸಾಲಕ್ಕೆ ಮುಖ್ಯಮಂತ್ರಿ ಯಡಿಯೂರಪ್ಪ ಸೂಚನೆ

ಬೆಂಗಳೂರು: ವಸತಿ ಹಾಗೂ ಸ್ವಉದ್ಯೋಗ ಯೋಜನೆಗಳ ಫಲಾನುಭವಿಗಳಿಗೆ ಸಾಲ ನೀಡುವಲ್ಲಿ ಬ್ಯಾಂಕ್‌ಗಳು ವಿಳಂಬ ಧೋರಣೆ ತಾಳುತ್ತಿರುವುದು ಸರಿಯಲ್ಲ. ಇದರಿಂದ ಬಡವರಿಗೆ ನೆರವು ಕಲ್ಪಿಸುವ ಉದ್ದೇಶ ಸಕಾಲದಲ್ಲಿ ಅನುಷ್ಠಾನವಾಗದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪ್ರಧಾನಮಂತ್ರಿ ಆವಾಸ್ ಹಾಗೂ ಪ್ರಧಾನ ಮಂತ್ರಿ ಸ್ವನಿಧಿ ಯೋಜನೆಗಳಡಿ ತ್ವರಿತವಾಗಿ ಸಾಲ ವಿತರಣೆ ಮಾಡದಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಗುರುವಾರ ವಸತಿ ಯೋಜನೆಗಳ ಪ್ರಗತಿ ಪರಿಶೀಲನೆ ಹಾಗೂ ಬ್ಯಾಂಕ್‌ಗಳ ಜತೆ ಸಭೆ ನಡೆಸಿದ ಅವರು, ಬ್ಯಾಂಕ್‌ಗಳಿಂದ ಸಕಾಲಕ್ಕೆ ಸಾಲ ಸಿಗದ ಕಾರಣ ಬಜೆಟ್ ಗುರಿ ತಲುಪಲು ಸಾಧ್ಯವಾಗದ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿದರು.

ಪ್ರಧಾನ ಮಂತ್ರಿ ಆವಾಸ್ ಹಾಗೂ ಪ್ರಧಾನ ಮಂತ್ರಿ ಸ್ವನಿಧಿ ಯೋಜನೆಗಳು ನರೇಂದ್ರ ಮೋದಿಯವರು ಬಡವರಿಗಾಗಿ ಜಾರಿಗೊಳಿಸಿರುವ ಮಹತ್ವಾಕಾಂಕ್ಷೆಯ ಯೋಜನೆಗಳು. ಇವುಗಳ ಅನುಷ್ಠಾನಕ್ಕೆ ಬ್ಯಾಂಕ್ ಅಧಿಕಾರಿಗಳು ಮೊದಲ ಆದ್ಯತೆ ನೀಡುತ್ತಿಲ್ಲ ಎಂದು ತಿಳಿಸಿದರು.

ದೇಶದ ಇತರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಈ ಎರಡೂ ಯೋಜನೆಗಳ ಪ್ರಗತಿ ಕುಂಠಿತವಾಗಿದೆ. ಇದಕ್ಕೆ ಸಾಲ ಮಂಜೂರಾತಿ ವಿಳಂಬವಾಗುತ್ತಿರುವುದು ಗಮನಕ್ಕೆ ಬಂದಿದ್ದು, ಮುಂದೆ ಈ ರೀತಿ ಆಗದಂತೆ ನೋಡಿಕೊಳ್ಳಿ ಎಂದು ಸೂಚಿಸಿದರು. ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಬಾಕಿಯಾಗಿರುವ ಅರ್ಜಿಗಳನ್ನು 15 ದಿನಗಳೊಳಗೆ ಆಯಾ ಜಿಲ್ಲೆಗಳ ಲೀಡ್ ಬ್ಯಾಂಕ್‌ಗಳಿಗೆ ಸಲ್ಲಿಸಿ. ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಸಂಬಂಧಪಟ್ಟ ಬ್ಯಾಂಕುಗಳಿಗೆ ಕಳುಹಿಸಿ ಮಂಜೂರಾತಿ ಪ್ರಕ್ರಿಯೆ ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಹೇಳಿದರು.


ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ರಾಜ್ಯದಲ್ಲಿ 53,695 ಅರ್ಜಿಗಳಿಗೆ ಮಾತ್ರ ಮಂಜೂರಾತಿ ದೊರೆತಿದ್ದು, ಇತರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯ ಹಿಂದುಳಿದಿದೆ. ಅದೇ ರೀತಿ ಇತರೆ ವಸತಿ ಯೋಜನೆಯಡಿ ಮಂಜೂರಾಗಿರುವ 3,46,414 ಪ್ರಕರಣಗಳ ಪೈಕಿ 1,16,165 ಪ್ರಕರಣಗಳಿಗೆ ಕಾರ್ಯಾದೇಶ ನೀಡಲಾಗಿದ್ದು, 19,658 ಮನೆಗಳು ಮಾತ್ರ ಪೂರ್ಣಗೊಂಡಿವೆ ಎಂದು ಸಭೆಯಲ್ಲಿ ಮಾಹಿತಿ ನೀಡಲಾಯಿತು.

ಪ್ರಧಾನ ಮಂತ್ರಿ ಸ್ವನಿಧಿ ಯೋಜನೆಯಡಿ ಬೀದಿ ವ್ಯಾಪಾರಿಗಳಿಗೆ 10 ಸಾವಿರ ರೂ.ಗಳ ದುಡಿಯುವ ಬಂಡವಾಳ ಸೌಲಭ್ಯ ಶೇ. 7ರ ಬಡ್ಡಿ ದರದಲ್ಲಿ ಸಾಲ ಒದಗಿಸಲಾಗುತ್ತಿದೆ. ಈವರೆಗೆ 2,24,368 ಅರ್ಜಿಗಳನ್ನು ಯೋಜನೆಯಡಿ ಸ್ವೀಕರಿಸಲಾಗಿದ್ದು, 66,423 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಶೇ 30 ರಷ್ಟು ಅರ್ಜಿಗಳನ್ನು ಮಾತ್ರ ವಿಲೇವಾರಿ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥ ನಾರಾಯಣ, ವಸತಿ ಸಚಿವ ವಿ. ಸೋಮಣ್ಣ, ಮುಖ್ಯ ಕಾರ್ಯದರ್ಶಿ ಪಿ.ರವಿ ಕುಮಾರ್, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ, ಕೆನರಾ ಬ್ಯಾಂಕ್ ಕಾರ್ಯನಿರ್ವಾಹಕ ನಿರ್ದೇಶಕರಾದ ಬಿ. ಮಣಿಮೇಖಲೈ, ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದ ಪ್ರಾದೇಶಿಕ ನಿರ್ದೇಶಕ ಜೋಸ್ ಜೆ ಕಟ್ಟೂರ್ ಉಪಸ್ಥಿತರಿದ್ದರು.

### ಬಜೆಟ್‌ನಲ್ಲಿ ಸೂಕ್ತ ಅನುದಾನ

ವಸತಿ ಯೋಜನೆಗಳಿಗೆ ಸರ್ಕಾರವು 2.70 ಲಕ್ಷ ರೂ. ನೆರವು ನೀಡುತ್ತಿದ್ದು ಉಳಿದ 2 ಲಕ್ಷ ರೂ. ಬ್ಯಾಂಕುಗಳು ಸಾಲದ ರೂಪದಲ್ಲಿ ನೀಡಬೇಕಾಗಿದೆ. ಪ.ಜಾತಿ ಮತ್ತು ಪಂಗಡದವರಿಗೆ 3.50 ಲಕ್ಷ ರೂ. ನೆರವು ನೀಡಲಾಗುತ್ತಿದೆ. ಪಟ್ಟಣ ಪ್ರದೇಶದಲ್ಲಿ 3.40 ಲಕ್ಷ ಮನೆ ನಿರ್ಮಿಸುವ ಗುರಿ ಹೊಂದಲಾಗಿದೆ. ಹಣದ ಕೊರತೆ ಇಲ್ಲ, ಬಜೆಟ್‌ನಲ್ಲಿ ಸೂಕ್ತ ಅನುದಾನ ಸಿಗಲಿದೆ. ಮುಖ್ಯಮಂತ್ರಿಯವರ 1 ಲಕ್ಷ ಮನೆ ನಿರ್ಮಾಣ ಯೋಜನೆಯಡಿ 53 ಸಾವಿರ ಮನೆಗಳ ನಿರ್ಮಾಣ ವಿವಿಧ ಹಂತಗಳಲ್ಲಿವೆ ಎಂದು ವಸತಿ ಸಚಿವ ವಿ.ಸೋಮಣ್ಣ ಹೇಳಿದರು.



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಗುರುವಾರ ವಸತಿ ಯೋಜನೆಗಳ ಪ್ರಗತಿ ಪರಿಶೀಲನೆ ಹಾಗೂ ಬ್ಯಾಂಕ್‌ಗಳ ಜತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಭೆ ನಡೆಸಿದರು. ಡಿಸಿಎಂ ಅಶ್ವತ್ಥ ನಾರಾಯಣ, ವಸತಿ ಸಚಿವ ವಿ. ಸೋಮಣ್ಣ, ಇತರರಿದ್ದರು.